ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 21 ಇಎಸ್‌ಟಿ 4(ಎ) 2015 /1767

ನಿರ್ದೇಶಕರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು -560001,
ದಿನಾಂಕ: 06.05.2016.

**ಸುತ್ತೋಲೆ**

ವಿಷಯ: ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿಯಲ್ಲಿ ಉನ್ನತ ಹಂತದ ಎಜಿಪಿ ಮಂಜೂರಾತಿಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ: ಇಡಿ 96 ಡಿಟಿಇ 2010 ದಿ: 07.03.2011.
2) ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ 55 ಇಎಸ್‌ಟಿ 4(ಎ) 2011 ದಿ: 08.10.2012

*-*-*-*

ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ರಾಜ್ಯದ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜಿನ ಅಧ್ಯಾಪಕರುಗಳಿಗೆ 06ನೇ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಯನ್ನು ದಿ: 01.01.2006 ರಿಂದ ಪೂರ್ವಾನ್ವಯವಾಗಿ ಜಾರಿಗೊಳಿಸಿದೆ. ಸದರಿ ಆದೇಶದ ಅಪೆಂಡಿಕ್ಸ್ -2 ರಲ್ಲಿ ಸಿ.ಎ.ಎಸ್ ಅಡಿಯಲ್ಲಿ ವಿವಿಧ ಹಂತದ ಎಜಿಪಿ ಮಂಜೂರಾತಿಗೆ ಅವಕಾಶ ಕಲ್ಪಿಸಿರುತ್ತದೆ. ಅದರಂತೆ ಎಜಿಪಿ ಮಂಜೂರಾತಿ ಬಗ್ಗೆ ಉಲ್ಲೇಖ (2) ರ ಈ ನಿರ್ದೇಶನಾಲಯದ ಪತ್ರದಲ್ಲಿ ಸರ್ಕಾರದಿಂದ ಸ್ಪಷ್ಟೀಕರಣ ಕೋರಿದ್ದು, ಸ್ಪಷ್ಟೀಕರಣ ಬಂದ ನಂತರ ಅರ್ಹರಿರುವ ಬೋಧಕ ಸಿಬ್ಬಂದಿಗಳ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಲಾಗಿತ್ತು.

ಅದರಂತೆ ಈ ಮೂಲಕ ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳು ವೃತ್ತಿ ಪದೋನ್ನತಿಗೆ ಅರ್ಹತೆಯನ್ನು ಪರಿಶೀಲಿಸಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ ದಿನಾಂಕ: 21.05.2016 ರೊಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ : ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ.

ಇ-ಗವರ್ನೆನ್ಸ್ ವಿಭಾಗ - ವೆಬ್‌ಸೈಟಿನಲ್ಲಿ ಅಳವಡಿಸಲು.